ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

2018 ರಿಂದ ಇಲ್ಲಿಯವರೆಗೆ ಅನ್ನಭಾಗ್ಯ ಯೋಜನೆಯ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

120 (63) ಮಾನ್ಯ ಆಹಾರ ಮತ್ತು ನಾಗರಿಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2018-19, 2019-20 ರಲ್ಲಿ ಅನ್ನಭಾಗ್ಯ ಯೋಜನೆ ಅನ್ವಯ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಯೋಜನೆ ಅನ್ವಯ ಪ್ರಸ್ತುತ ನೀಡುವ ಅಕ್ಕಿ ಮತ್ತು ಇತರ ವಸ್ತುಗಳ ವಿವರ ನೀಡುವುದು ;

(ಆ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆ ಅನ್ವಯ ಪ್ರಸ್ತುತ ನೀಡುತ್ತಿರುವ ಅಕ್ಕಿ ಮತ್ತು ಇತರ ವಸ್ತುಗಳನ್ನು ಕಡಿತಗೊಳಿಸಲಾಗಿದೆಯೇ ; ಈ ಬಗ್ಗೆ ಸರ್ಕಾರದಿಂದ ಸುತ್ತೋಲೆ ನೀಡಲಾಗಿದೆಯೇ ; ಇದರಿಂದಾಗಿ ಸರ್ಕಾರಕ್ಕೆ ತಗಲುವ ವೆಚ್ಚ ಎಷ್ಟು ;

(ಇ) ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಅಕ್ರಮವಾಗಿ ಮಾರಾಟ ಮಾಡುವವರ ಬಗ್ಗೆ ರಾಜ್ಯದಲ್ಲಿ ಎಷ್ಟು ಪ್ರಕರಣಗಳು ಪತ್ತೆಯಾಗಿದೆ; ಅವರಿಂದ ವಶಪಡಿಸಿಕೊಂಡ ಅಕ್ಕಿ ಎಷ್ಟು ;

(ಈ) ರಾಜ್ಯದಲ್ಲಿ ಎಷ್ಟು ಟನ್ ಅಕ್ಕಿಯನ್ನು ಪ್ರತಿ ತಿಂಗಳು ಒದಗಿಸಲಾಗುತ್ತಿದೆ ; ಎಲ್ಲಿಂದ ಅಕ್ಕಿಯನ್ನು ಖರೀದಿಸಲಾಗುತ್ತದೆ; ಪ್ರಸ್ತುತ ಯಾವ ದರದಲ್ಲಿ ಅಕ್ಕಿಯನ್ನು ಸರ್ಕಾರ ಕೊಂಡುಕೊಳ್ಳುತ್ತದೆ; (ವಿವರ ನೀಡುವುದು)

(ಉ) ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಕಡಿತಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದರೆ ವಿವರ ನೀಡುವುದು ?